# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 657

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 04.03.2021

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿರವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರ ಸುತ್ತಮುತ್ತಲಿನ ಪ್ರದೇಶವು ಜನದಟ್ಟಣೆಯಿಂದ ಕೂಡಿದ್ದು, ಈಗ ಇರುವ ರಸ್ತೆಗಳಲ್ಲಿ ವಾಹನ ದಟ್ಟಣೆಯಿಂದಾಗಿ ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಸಿಲುಕಿ ಕಛೇರಿ ಹಾಗೂ ನಿಗಧಿತ ತಾಣ ತಲುಪಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು |
| ಆ | ಆದಗ್ಯೂ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹೊಸ ಬಡಾವಣೆಗಳ ನಿರ್ಮಾಣ ಮಾಡಲಾಗುತ್ತಿದ್ದು, ಈ ಬಡಾವಣೆಗಳ ನಿರ್ಮಾಣದಿಂದ ಇನ್ನೂ ಹೆಚ್ಚಿನ ದಟ್ಟಣೆಯಿಂದಾಗಿ ಎಲ್ಲಾ ರೀತಿಯ ಸಮಸ್ಯೆಗಳು ಉದ್ಭವವಾಗುವುದನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪ್ರಸ್ತುತ ನಾಡಪ್ರಭು ಕೆಂಪೇಗೌಡ ಬಡಾವಣೆಯನ್ನು ನಿರ್ಮಾಣ ಮಾಡಲಾಗುತ್ತಿರುವುದರಿಂದ ಇನ್ನೂ ಹೆಚ್ಚಿನ ದಟ್ಟಣೆಯಿಂದಾಗಿ ಎಲ್ಲಾ ರೀತಿಯ ಸಮಸ್ಯೆಗಳು ಉದ್ಭವವಾಗುವುದನ್ನು ತಡೆಯಲು, ಸದರಿ ಬಡಾವಣೆಯಲ್ಲಿ ಒಳರಸ್ತೆಗಳನ್ನು ಒಳಗೊಂಡಂತೆ Major Arterial Road ಅನ್ನು ನಿರ್ಮಿಸಲಾಗುತ್ತಿದೆ, ಈಗಾಗಲೇ ಪ್ರಾಧಿಕಾರದಿಂದ ಬೆಂಗಳೂರಿನಲ್ಲಿ ಹೊರ ವರ್ತುಲ ರಸ್ತೆ, ಮೇಲುಸೇತುವೆ, ಅಂಡರ್‌ಪಾಸ್‌ಗಳನ್ನು ನಿರ್ಮಾಣ ಮಾಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿರ್ವಹಣೆಗಾಗಿ ಹಸ್ತಾಂತರಿಸಲಾಗಿರುತ್ತದೆ. ಇದರ ಜೊತೆಗೆ ಬೆಂಗಳೂರಿನ ವರ್ತುಲ ರಸ್ತೆಯಲ್ಲಿ ಸಂಚಾರ ದಟ್ಟಣೆಯನ್ನು ತಗ್ಗಿಸಲು, ಪೆರಿಫೆರಲ್ ರಿಂಗ್ ರಸ್ತೆಯನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ಈ ರೀತಿಯ ಬಡಾವಣೆಗಳನ್ನು ನಿರ್ಮಾಣ ಮಾಡುವುದನ್ನು ನಿಲ್ಲಿಸಿ ಸ್ಯಾಟಲೈಟ್ ಮಾದರಿಯ ನಗರಗಳನ್ನು ಅಭಿವೃದ್ಧಿ ಪಡಿಸುವ ಯೋಚನೆ ಸರ್ಕಾರಕ್ಕಿದೆಯೇ? (ಮಾಹಿತಿ ನೀಡುವುದು) | ಪ್ರಸ್ತುತ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸ್ಯಾಟಲೈಟ್ ಮಾದರಿಯ ನಗರಗಳನ್ನು ಅಭಿವೃದ್ಧಿ ಪಡಿಸುವ ಯೋಚನೆ /ಪ್ರಸ್ತಾವನೆಯು ಇರುವುದಿಲ್ಲ. |

ನಅಇ 39 ಬೆಂಅಸೇ 2021

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿಗಳು